ದೂರವಾಣಿ ಸಂಖ್ಯೆ : 2419677/2419361
ಫ್ಯಾಕ್ಸ್: 0821-2419363/2419301

email : registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ : 1916

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು-570005

ಸಂಖ್ಯೆ: ಎಸಿ6/148/2024-25

ದಿನಾಂಕ: 25.02.2025

## ಸುತ್ತೋಲೆ

ವಿಷಯ: 2024-25ನೇ ಶೈಕ್ಷಣಿಕ ಸಾಲಿನ ಬಿ.ಎಡ್. ಪ್ರೋಗ್ರಾಂನ ಪ್ರಥಮ ವರ್ಷದ ವಿದ್ಯಾರ್ಥಿಗಳ ಪ್ರವೇಶಾತಿಯನ್ನು ಅನುಮೋದಿಸಿಕೊಳ್ಳುವ ಬಗ್ಗೆ.

ಉಲ್ಲೇಖ: 1. ಈ ಕಛೇರಿಯ ಸಮಸಂಖ್ಯೆ ಅಧಿಸೂಚನೆ ದಿನಾಂಕ 01.02.2025

2. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕೇಂದ್ರೀಕೃತ ದಾಖಲಾತಿ ಘಟಕ, ಬೆಂಗಳೂರು ಇವರ ಸೂಚನೆ ಪತ್ರ ಸಂಖ್ಯೆ: ಸಿಎಸಿ-05/ಬಿ.ಇಡಿ.ದಾ-8/2024-25, ದಿ: 19.02.2025

*****

ಮೇಲ್ಕಂಡ ಉಲ್ಲೇಖ(2)ರಲ್ಲಿನ ಶಾಲಾ ಶಿಕ್ಷಣ ಇಲಾಖೆಯ ಸೂಚನೆಯ ಹಿನ್ನೆಲೆಯಲ್ಲಿ, 2024-25ನೇ ಶೈಕ್ಷಣಿಕ ಸಾಲಿನ **ಪ್ರಥಮ ವರ್ಷದ** ಬಿ.ಎಡ್. ಪ್ರೋಗ್ರಾಂನ ಪ್ರವೇಶಾತಿ ಸಂಬಂಧ 6ನೇ ಸುತ್ತಿನಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಂದ ದಿನಾಂಕ **07.03.2025ರೊಳಗೆ** Offlineನಲ್ಲಿ ಶುಲ್ಕ ಪಾವತಿಸಿಕೊಂಡು ನಂತರ ಪಾವತಿಸಿದ ಶುಲ್ಕಗಳ ರಶೀದಿಗಳನ್ನು UUCMS Portalನಲ್ಲಿ ಸದರಿ ವಿದ್ಯಾರ್ಥಿಗಳಿಂದ Upload ಮಾಡಿಸುವಂತೆ ತಿಳಿಸಲಾಗಿದೆ. ನಂತರ, ವಿದ್ಯಾರ್ಥಿಗಳಿಂದ ವಿಶ್ವವಿದ್ಯಾನಿಲಯಕ್ಕೆ ಪಾವತಿಸಬೇಕಾದ ಶುಲ್ಕಗಳನ್ನು ದಿನಾಂಕ **13.03.2025ರೊಳಗೆ** ವಿಶ್ವವಿದ್ಯಾನಿಲಯದ ವಿವಿಧ ಖಾತೆಗಳಿಗೆ ಜಮಾ ಮಾಡಿ ಪ್ರವೇಶಾತಿ ವಿವರಗಳು ಮತ್ತು ಮೂಲ ಚಲನ್‌ಗಳನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಿ ದಿನಾಂಕ **17.03.2025ರೊಳಗೆ** ಕಡ್ಡಾಯವಾಗಿ ಪ್ರವೇಶಾತಿಗಳಿಗೆ ಅನುಮೋದನೆ ಪಡೆಯುವಂತೆ ಈ ಮೂಲಕ ತಿಳಿಸಲಾಗಿದೆ.

ಇನ್ನುಳಿದ ವಿದ್ಯಾರ್ಥಿಗಳ ಪ್ರವೇಶಾತಿ ಅನುಮೋದನೆಯ ಸಂಬಂಧ ಉಲ್ಲೇಖ(1)ರ ಅಧಿಸೂಚನೆಯಲ್ಲಿ ಸೂಚಿಸಿರುವ ದಿನಾಂಕದಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ನಿಗದಿತ ಸಮಯದೊಳಗೆ ಪ್ರವೇಶಾತಿಗಳನ್ನು ಅನುಮೋದಿಸಿಕೊಳ್ಳದಿದ್ದಲ್ಲಿ ವಿದ್ಯಾರ್ಥಿಗಳಿಗೆ State Scholarship Portal ಮುಖಾಂತರ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಅನನುಕೂಲವಾದಲ್ಲಿ ಅದಕ್ಕೆ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರುಗಳು ನೇರ ಹೊಣೆಗಾರರಾಗುತ್ತಾರೆ ಎಂದು ಈ ಮೂಲಕ ತಿಳಿಸಲಾಗಿದೆ.

ಕುಲಸಚಿವರು 25/2/25
ಕುಲಸಚಿವರು
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು

ಇವರಿಗೆ;

1. ಎಲ್ಲಾ ಬಿ.ಎಡ್. ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಕುಲಸಚಿವ(ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಡೀನರು, ಶಿಕ್ಷಣ ನಿಕಾಯ, ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ಅಧ್ಯಯನ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಪ್ರೊ.ನಾಗೇಂದ್ರಸ್ವಾಮಿ, ನೋಡಲ್ ಆಫೀಸರ್ - **UUCMS,** ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಮಾನ್ಯ ಕುಲಪತಿ/ ಕುಲಸಚಿವರು/ ಕುಲಸಚಿವರು(ಪರೀಕ್ಷಾಂಗ)ರವರ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ಕಛೇರಿ ಪ್ರತಿ.